# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

**ಟಮಕ, ಕೋಲಾರ – 563103**

ನಂ. ಬೆಂಉವಿ/ರಾಶಿನೀ: 2020/ಕಾ ಗಾ/ 2976 /2021–22 ದಿನಾಂಕ: 11.03.2022

**ಸುತ್ತೋಲೆ**

**ವಿಷಯ: ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವತಿಯಿಂದ ರಾಷ್ಟ್ರೀಯ ಶಿಕ್ಷಣ ನೀತಿ–2020 ರ ಅನ್ವಯ ಪ್ರಥಮ ವರ್ಷದ ವಿವಿಧ ಸ್ನಾತಕೋತ್ತರ ಪದವಿಗಳ(ಎಂ.ಬಿ.ಎ,ಎಂ.ಸಿ.ಎ ಸೇರಿದಂತೆ) ಪ್ರವೇಶಾತಿ UUCMS-Admission Module ಕುರಿತು ಕಾರ್ಯಾಗಾರವನ್ನು ಆಯೋಜಿಸಿರುವ ಕುರಿತು.**

**ಉಲ್ಲೇಖ:1. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 11.03.2022**

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2021–22ನೇ ಶೈಕ್ಷಣಿಕ ಸಾಲಿಗೆ **ಪ್ರಥಮ ವರ್ಷದ ವಿವಿಧ ಸ್ನಾತಕೋತ್ತರ ಪದವಿಗಳ** (ಎಂ.ಬಿ.ಎ, ಎಂ.ಸಿ.ಎ ಸೇರಿದಂತೆ) ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭಮಾಡಿದ್ದು, ವಿದ್ಯಾರ್ಥಿಗಳ ಮಾಹಿತಿಯನ್ನು ಕರ್ನಾಟಕ ಸರ್ಕಾರ ಅಭಿವೃದ್ಧಿಪಡಿಸಿರುವ UUCMS ಮುಖಾಂತರವೇ ತುಂಬಬೇಕಾಗಿರುತ್ತದೆ. ಆದ್ದರಿಂದ, ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನ್ವಯ **UUCMS-Admission Module** ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ತುಂಬುವ ವಿಧಾನ ಇತ್ಯಾದಿಗಳ ಕುರಿತು ಕಾರ್ಯಾಗಾರವನ್ನು ಆಯೋಜಿಸುವ ಮೂಲಕ ಸಂಕ್ಷಿಪ್ತವಾಗಿ ಮಾಹಿತಿಯನ್ನು ನೀಡಲು ವಿಶ್ವವಿದ್ಯಾಲಯವು ನಿರ್ಧರಿಸಿದೆ.

ಅದರಂತೆ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ **ಎಲ್ಲಾ ಸ್ನಾತಕೋತ್ತರ ಪದವಿಗಳ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು ಮತ್ತು UUCMSನ ಸಂಯೋಜನಾಧಿಕಾರಿಗಳಿಗೆ ದಿನಾಂಕ: 15.03.2022** ಬೆಳಗ್ಗೆ 11.00 **ಘಂಟೆಗೆ ವಿಶ್ವವಿದ್ಯಾಲಯದ ಆಡಳಿತ ಭವನ ಟಮಕ ಕೋಲಾರ ಇಲ್ಲಿ ಭೌತಿಕವಾಗಿ ಕಾರ್ಯಾಗಾರ ಸಭೆಯನ್ನು ಏರ್ಪಡಿಸಲಾಗಿದೆ.**

ಆದ್ದರಿಂದ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಎಲ್ಲಾ **ವಿವಿಧ ಸ್ನಾತಕೋತ್ತರ ಪದವಿಗಳ (ಎಂ.ಬಿ.ಎ,ಎಂ.ಸಿ.ಎ ಸೇರಿದಂತೆ)ಕಾಲೇಜು** ಪ್ರಾಂಶುಪಾಲರು ಹಾಗೂ UUCMSನ ಸಂಯೋಜನಾಧಿಕಾರಿಗಳು ಭಾಗವಹಿಸಿ, ಕಾರ್ಯಾಗಾರವನ್ನು ಸದುಪಯೋಗಪಡಿಸಿಕೊಳ್ಳಲು ತಿಳಿಸಿದೆ.

11/3

**ಕುಲಸಚಿವರು**

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕ, ಕೋಲಾರ–ಕರ್ನಾಟಕ–563 103.

**ರವರಿಗೆ,**

**ನಿರ್ದೇಶಕರು, ಪ್ರಾಂಶುಪಾಲರು ಹಾಗೂ ಸಂಯೋಜನಾಧಿಕಾರಿಗಳು,**
**ವಿವಿಧ ಸ್ನಾತಕೋತ್ತರ ಪದವಿ ಕಾಲೇಜುಗಳು (ಎಂ.ಬಿ.ಎ, ಎಂ.ಸಿ.ಎ ಸೇರಿದಂತೆ)**
**ಬೆಂಗಳೂರು ಉತ್ತರ ವಿಶ್ವವಿದ್ಯಾಲಯ,ಟಮಕ,ಕೋಲಾರ**

**ಪ್ರತಿಗಳು:**

1. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಕರ್ನಾಟಕ ಸರ್ಕಾರ, ಬೆಂಗಳೂರು –01
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು – 01
3. ಆಪ್ತ ಶಾಖೆ, ಕುಲಪತಿಗಳ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ–563103.
4. ಕುಲಸಚಿವರು (ಮೌಲ್ಯಮಾಪನ) ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ರವರ ಮಾಹಿತಿಗಾಗಿ
5. ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ–563103.
6. ನಿರ್ದೇಶಕರು ಸ್ನಾತಕೋತ್ತರಕೇಂದ್ರ ಮಂಗಸಂದ್ರ, ಸ್ನಾತಕೋತ್ತರ ವಿಭಾಗಗಳ ಸಂಯೋಜಕರನ್ನು ನಿಯೋಜಿಸುವುದು.
7. ಶ್ರೀ ಭೀಮರಡ್ಡಿ, ಕುಲಸಚಿವರ ಆಪ್ತಶಾಖೆ, ಬೆಂ.ಉ.ವಿ.ವಿ ಸೂಕ್ತ ವ್ಯವಸ್ಥೆ ಮಾಡಲು ತಿಳಿಸಲಾಗಿದೆ.
8. ಕಛೇರಿ ಪ್ರತಿ